ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	495
ಸದಸ್ಯರ ಹೆಸರು	:	ಶ್ರೀ ಬಿ.ಕೆ.ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	:	16.12.2021
ಉತ್ತರಿಸಬೇಕಾದ ಸಚಿವರು	:	ಮಾನ್ಯ ಮುಖ್ಯಮಂತ್ರಿರವರು

ಕ್ರಸಂ	ಪ್ರಶ್ನೆಗಳು	ಉತ್ತರಗಳು
(ಅ)	ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ ನಿವೇಶನ ಹಂಚಿಕೆ ಭೂಸ್ವಾಧೀನ ಮತ್ತು ಜಮೀನು ಮಾಲೀಕರಿಗೆ ಪರಿಹಾರ ವಿತರಣೆಯಲ್ಲಿ ಅವ್ಯವಹಾರ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಅವ್ಯವಹಾರ ನಡೆಸುತ್ತಿರುವುದು ಅಧಿಕಾರಿಗಳ ಮೇಲೆ ಕಾನೂನು ಕ್ರಮ ಜರುಗಿಸಲಾಗಿದೆಯೇ; ಜರುಗಿಸಿದ್ದಲ್ಲಿ ಪ್ರಕರಣ ಯಾವ ಹಂತದಲ್ಲಿದೆ;	ನಿವೇಶನ ಹಂಚಿಕೆ ಹಾಗೂ ಭೂಸ್ವಾಧೀನ ಪ್ರಕರಣಗಳಲ್ಲಿ ನಿರ್ದಿಷ್ಟವಾಗಿ ಆರೋಪಗಳು ಬಂದಂತಹ ಸಂದರ್ಭದಲ್ಲಿ ಪ್ರಾಧಿಕಾರದ ಎಸ್.ಟಿ.ಎಫ್ ನಿಂದ ತನಿಖೆ ನಡೆಸಿ ಪ್ರಕರಣವಾರು ನಿಯಮಾನುಸಾರ ಕ್ರಮಗಳನ್ನು ಪ್ರಾಧಿಕಾರದ ವತಿಯಿಂದ ಕೈಗೊಳ್ಳಲಾಗುತ್ತಿದೆ. ಕೆಲವು ಪ್ರಕರಣಗಳಲ್ಲಿ ತನಿಖಾ ಸಂಸ್ಥೆಗಳ ವಿಚಾರಣಾ ವರದಿಯು ಸಲ್ಲಿಕೆಯಾದ ನಂತರ ನಿಯಮಾನುಸಾರ ಸೂಕ್ತ ಕ್ರಮಗಳನ್ನು ಕೈಗೊಳ್ಳಲಾಗುವುದು.
(ಆ)	ಪ್ರಾಧಿಕಾರದಿಂದ ನಗರದ ವಿವಿಧ ನಿರ್ಮಿಸಿರುವ ಬಡಾವಣೆಯಲ್ಲಿ ಅರ್ಹತೆಯಿಲ್ಲದಿದ್ದರೂ ಕೆಲವರಿಗೆ ನಾಗರೀಕ ಮೂಲ ಸೌಲಭ್ಯಕ್ಕೆ ಕಾಯ್ದಿರಿಸಿದ ನಿವೇಶನಗಳನ್ನು ಹಂಚಿಕೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರದ ಕ್ರಮವೇನು? (ಸಂಪೂರ್ಣ ಮಾಹಿತಿ ಒದಗಿಸುವುದು).	ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ರಚಿಸಿದ ಬಡಾವಣೆಯಲ್ಲಿ ಅಥವಾ ಪ್ರಾಧಿಕಾರವು ಅನುಮೋದಿಸಿದ ಖಾಸಗಿ ಬಡಾವಣೆಯಲ್ಲಿನ ನಾಗರೀಕ ಸೌಲಭ್ಯ ನಿವೇಶನಗಳನ್ನು 30 ವರ್ಷಗಳ ಅವಧಿಗೆ ಗುತ್ತಿಗೆ ಆಧಾರದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ(ನಾಗರೀಕ ಸೌಲಭ್ಯ ನಿವೇಶನಗಳ ಹಂಚಿಕೆ) ನಿಯಮಗಳು 1989 ರಲ್ಲಿ ಕಲ್ಪಿಸಿರುವ ಅವಕಾಶಗಳಲ್ಲಿ ಕಾಲಕಾಲಕ್ಕೆ ಪ್ರಾಧಿಕಾರವು ನಿಗಧಿಪಡಿಸಿದ ಗುತ್ತಿಗೆ ದರವನ್ನು ವಿಧಿಸಿ ಸರ್ಕಾರಿ ಇಲಾಖೆಗಳ/ಸಂಸ್ಥೆಗಳು/ಸಂಘಗಳು/ ಸಹಕಾರ ಸಂಘಗಳು/ ಟ್ರಸ್ಟ್‌ಗಳು ಇವುಗಳಿಗೆ ನಿರ್ದಿಷ್ಟ ಉದ್ದೇಶಗಳಿಗಾಗಿ ಬಳಸಲು ಹಂಚಿಕೆಯನ್ನು ಮಾಡಲಾಗುತ್ತದೆ. ನಾಗರೀಕ ಸೌಲಭ್ಯ ನಿವೇಶನಗಳನ್ನು ಖಾಸಗಿ ಸಂಘ ಸಂಸ್ಥೆಗಳ ಪರವಾಗಿ ಹಂಚಿಕೆಯನ್ನು ಮಾಡಲು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ನಾಗರೀಕ ಸೌಲಭ್ಯ ನಿವೇಶನ ಹಂಚಿಕೆ) ನಿಯಮಗಳು 1989 ರನ್ವಯ ಪತ್ರಿಕಾ ಪ್ರಕಟಣೆಯನ್ನು ಹೊರಡಿಸಿ ಅಂತಹ ಸಂಘ ಸಂಸ್ಥೆಗಳಿಂದ ಅರ್ಜಿಗಳನ್ನು ಆಹ್ವಾನಿಸಿ ನಾಗರೀಕ ಸೌಲಭ್ಯ ನಿವೇಶನ ಹಂಚಿಕೆ ಸಮಿತಿ ಸಭೆಯ ಮುಂದೆ ಅರ್ಜಿಗಳನ್ನು ಮಂಡಿಸಿ ನಿಯಮಾನುಸಾರ ಹಂಚಿಕೆ ಮಾಡಲಾಗುತ್ತದೆ. ಪ್ರಾಧಿಕಾರದ ಸಭೆಯ ದಿನಾಂಕ:31.01.2000 ಠರಾವು ಸಂಖ್ಯೆ:28/2000 ರನ್ವಯ ಸರ್ಕಾರಿ ಸ್ವಾಮ್ಯಕ್ಕೊಳಪಟ್ಟ ಸಂಸ್ಥೆಗಳು, ಕೇಂದ್ರ ಮತ್ತು ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಿಗೆ ನಾಗರೀಕ ಸೌಲಭ್ಯ ನಿವೇಶನಗಳನ್ನು ಹಂಚಿಕೆ ಮಾಡುವ ಅಧಿಕಾರವನ್ನು ಪ್ರಾಧಿಕಾರದ ಅಧ್ಯಕ್ಷರು ಮತ್ತು ಆಯುಕ್ತರಿಗೆ ಪ್ರತ್ಯಾಯೋಜಿಸಲಾಗಿದೆ. ಸಿ.ಎ. ನಿವೇಶನದ ಹಂಚಿಕೆಯನ್ನು ಪಡೆದಿರುವ ಸಂಸ್ಥೆಯು ಗುತ್ತಿಗೆ ಕರಾರಿನಲ್ಲಿನ ಷರತ್ತುಗಳನ್ನು ಉಲ್ಲಂಘಿಸಿದ ಸಂದರ್ಭದಲ್ಲಿ ಪ್ರಕರಣವನ್ನು ಪರಿಶೀಲಿಸಿ ಸಿ.ಎ. ನಿವೇಶನ ಹಂಚಿಕೆಯನ್ನು ರದ್ದುಪಡಿಸಲು ಹಾಗೂ ಋಣಭಾರರಾಹಿತ್ಯವಾಗಿ ಸ್ವತ್ತನ್ನು ಪ್ರಾಧಿಕಾರದ ವಶಕ್ಕೆ ಪಡೆಯಲು ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತಿದೆ.

ಸಂಖ್ಯೆ: ನಅಇ 229 ಬೆಂಭೂಸ್ವಾ 2021

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ